ರ್ಶನ
ಬಗ್ಗೆ

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಯವ/ಕೊಉ/ಪಿಆರ್/ /2020-21

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 02-01-2021

## ದಿನಾಂಕ: 02-01-2021 ರಂದು ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-

**ಸಭೆಗೆ ಹಾಜರಿದ್ದವರು:**

- ಶ್ರೀ ಗುರು, ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀ ಬಸವರಾಜಪ್ಪ, ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ 08.
- ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ
- ಶ್ರೀ. ಮಂಜುನಾಥ್, ಹಿರಿಯ ಆರೋಗ್ಯ ಪರಿವೀಕ್ಷಕರು, ಅರೋಗ್ಯ
- ಶ್ರೀ. ಗೋವಿಂದರಾಜು, ಅಭಿಯಂತರರು, (BESCOM)

**ವಾರ್ಡ್ ಸಮಿತಿ ಸದಸ್ಯರು**

- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀಮತಿ ಜೆನ್ನಿ ಜೋಸೆಫ್, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ ಶ್ರೀಕಾಂತ್, ಆಮ್ಕೋ ಬಡಾವಣೆ, ಸದಸ್ಯರು
- ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ, ಸದಸ್ಯರು
- ಶ್ರೀ ವಿ ಎಮ್ ನಾಯಕ್, ಸಹಕಾರನಗರ, ಸದಸ್ಯರು
- ಶ್ರೀ ವೆಂಕಟಪ್ಪ, ದೇವಿನಗರ, ಸದಸ್ಯರು
- ಶ್ರೀ ಅರಸಪ್ಪ, "ಡಿ ಬ್ಲಾಕ್", ಸಹಕಾರನಗರ, ಸದಸ್ಯರು
- ಶ್ರೀ ಗಂಗಾಧರ್, ಭದ್ರಪ್ಪ ಬಡಾವಣೆ, ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ ಎ.ಆರ್. ರವರು ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿಯ ಸದಸ್ಯರುಗಳು ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಹೊಸ ವರುಷದ ಶುಭಾಶಯಗಳೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಗುರು, ಕಾ.ಪಾ.ಅ ಹಾಗೂ ನೋಡಲ್ ಅಧಿಕಾರಿ ರವರು ಮಾತನಾಡುತ್ತ, ಹೊಸ ವರುಷದ ಶುಭಾಶಯಗಳನ್ನು ಕೋರುತ್ತಾ, ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ ವಸತಿ ಕ್ಷೇಮಾಭಿವೃದಿ ಸಂಘದ ಸದಸ್ಯರುಗಳಿಗೆ ಹಾಗೂ ಅಧಿಕಾರಿಗಳಿಗೆ ವಿಚಾರಿಸಿದರು.

ಶ್ರೀಮತಿ. ಕವಿತ ಕಿ.ಆ.ನಿ ರವರು ತ್ಯಾಜ್ಯ ವಿಂಗಡಣೆ ಮಾಡುತ್ತಿದ್ದು, ಕೆಲವು ಸಾರ್ವಜನಿಕರು ಕೆಲವು ಸ್ಥಳಗಳಲ್ಲಿ ಕಸ ಎಸೆಯುತ್ತಿರುವುದು ಹಾಗೂ ವಿಂಗಡಿಸದೇ ಇರುವುದು ಕಂಡು ಬಂದಿದ್ದು, ಅಂತಹ ಸ್ಥಳಗಳಲ್ಲಿ ಹಾಜರಿದ್ದು, ದಂಡ ವಿಧಿಸಲಾಗುತ್ತಿರುತ್ತದೆಯೆಂದು ತಿಳಿಸಿದರು. ಈ ಕುರಿತು ನೋಡೆಲ್ ಅಧಿಕಾರಿಗಳು ಮಾತಾನಾಡಿ ಈ ಕುರಿತು ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವಂತೆ ಸೂಚಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮಾತನಾಡಿ, ಸದರಿ ಬಡಾವಣೆಯಲ್ಲಿ ಘನತ್ಯಾಜ್ಯದ ಸಮಸ್ಯೆ ಇರುತ್ತದೆ ನೀಡಿರುವ ಆಟೋ ಚಿಕ್ಕದಾಗಿದ್ದು, ಪರ್ಯಾಯ ವ್ಯವಸ್ಥೆ ಮಾಡುವಂತೆ ಸಭೆಗೆ ತಿಳಿಸಿದರು ಹಾಗೂ ಚರಂಡಿ ಸ್ಲಾಬ್ ಇಲ್ಲದ ಕಾರಣ ಸೊಳ್ಳೆ ಸಮಸ್ಯೆ ಇರುತ್ತದೆ ಎಂದು ಸಭೆಗೆ ತಿಳಿಸಿದರು. ಭದ್ರಪ್ಪ ಬಡಾವಣೆಯ ಸರ್ವೀಸ್ ರಸ್ತೆಯಲ್ಲಿ ಮಳೆನೀರು ನಿಂತು ವಾಹನಗಳು ಓಡಾಡುವುದಕ್ಕೆ ತುಂಬಾ ತೊಂದರೆಯುಂಟಾಗುತ್ತಿದ್ದು ಹಾಗೂ ಸದರಿ ಜಾಗದ ರಸ್ತೆಯಲ್ಲಿರುವ ಅಂಗಡಿಗಳ ಎದುರು ವಾಹನಗಳನ್ನು ನಿಲ್ಲಿಸುತ್ತಿರುತ್ತಾರೆ. ಅದರಿಂದ ಸಾರ್ವಜನಿಕರಿಗೆ ಓಡಾಡಲು ತುಂಬಾ ಕಷ್ಟಕರವಾಗಿರುತ್ತದೆ ಅದನ್ನು ಸಹ ಸರಿಪಡಿಸಿ ಕೊಡಲು ಕೋರಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಹಿರಿಯ ಆರೋಗ್ಯ ನಿರಿಕ್ಷಕರಿಗೆ ಸಂಬಂಧಿಸಿದ ಅಂಗಡಿಗಳಿಗೆ ನೋಟಿಸನ್ನು ಜಾರಿ ಮಾಡಲು ತಿಳಿಸಿದರು ಹಾಗೂ ಶ್ರೀ ಪ್ರವೀಣ್ ಎ. ಆರ್, ಕಿರಿಯ ಅಭಿಯಂತರರಿಗೆ ಈ ಕುರಿತು ಕ್ರಮ ಕೈಗೊಳ್ಳಲು ತಿಳಿಸಿದಾಗ ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ ರವರು ಮಾತನಾಡಿ ಚರಂಡಿ ಸ್ಲಾಬ್ ಮತ್ತು ಚರಂಡಿ ಸಿಲ್ಟ್ ತೆಗೆಯಲು ಟೆಂಡರ್ ಕರೆಯಲಾಗಿದೆ ಮತ್ತು ರಿಂಗ್ ರಸ್ತೆಯು ಬಿಡಿಎ ಅಧೀನದಲ್ಲಿದ್ದು, ನಿರ್ವಹಣೆಯು ಬಿಬಿಎಂಪಿಯ ಅಧೀನದಲ್ಲಿರುತ್ತದೆ. ಕಾಮಗಾರಿಯು ನಡೆಯುತ್ತಿದ್ದು, ಮುಂದಿನ ದಿನಗಳಲ್ಲಿ ಸಮಸ್ಯೆ ಬಗೆಹರಿಸುವುದಾಗಿ ಸಭೆಗೆ ತಿಳಿಸಿದರು.

ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ, ಹಿಂದಿನ ಸಭೆಯಲ್ಲಿ ವಿಚಾರಿಸಲಾದ ಬಡಾವಣೆಯಲ್ಲಿ ಅನುಮತಿಯನ್ನು ಪಡೆಯದೇ ಕಾರಿನ ಗ್ಯಾರೇಜ್ ಅನ್ನು ತೆರೆದಿರುತ್ತಾರೆ ಹಾಗೂ ಮುಖ್ಯರಸ್ತೆಯಲ್ಲಿ ಅವರ ವಾಹನವನ್ನು ಪಾರ್ಕಿಂಗ್ ಮಾಡಿರುತ್ತಾರೆ ಮತ್ತು ಸಾರ್ವಜನಿಕರಿಗೆ ಸಂಚಾರವನ್ನು ಮಾಡಲು ತುಂಬಾ ತೊಂದರೆ ಉಂಟಾಗುತ್ತಿರುತ್ತದೆ ಅವರ ವಿರುದ್ಧ ಯಾವ ರೀತಿ ಕ್ರಮಜರುಗಿಸಲಾಗಿದೆ ಎಂದು ಕೇಳಿದರು.

ಶ್ರೀ. ಮಂಜುನಾಥ್, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡಿ, ಸದರಿ ಗ್ಯಾರೇಜ್‌ಗೆ ಯಾವುದೇ ಅನುಮತಿಯನ್ನು ನೀಡಿರುವುದಿಲ್ಲ. ಈ ಕುರಿತು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಸಮಸ್ಯೆಯನ್ನು ಬಗೆಹರಿಸಲಾಗುವುದೆಂದು ಸಭೆಗೆ ತಿಳಿಸಿದರು. ಈ ಕುರಿತು ನೋಡೆಲ್ ಅಧಿಕಾರಿಗಳು ಮಾತನಾಡಿ ನೋಟೀಸ್ ನೀಡುವಂತೆ ತಿಳಿಸಿದರು.

ಶ್ರೀ ಅರಸಪ್ಪ, "ಡಿ ಬ್ಲಾಕ್", ಸಹಕಾರನಗರ, ಸದಸ್ಯರು ಮಾತನಾಡಿ ಸದರಿ ಬಡಾವಣೆಯಲ್ಲಿ ಎಲ್‌ಇಡಿ ಬಲ್ಬ್‌ಗಳ ಸಮಸ್ಯೆ ಇದ್ದು, ಸಾರ್ವಜನಿಕರು ರಾತ್ರಿವೇಳೆ ಸಂಚಾರಿಸುವ ಸಂದರ್ಭದಲ್ಲಿ ತೊಂದರೆಯುಂಟಾಗಿರುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಶ್ರೀ. ಪ್ರವೀಣ್ ಎ.ಆರ್. ರವರು ಸಹಾಯಕ ಅಭಿಯಂತರರು, ವಿದ್ಯುತ್ ವಿಭಾಗ, ಬಿಬಿಎಂಪಿ ರವರೊಂದಿಗೆ ಮಾತನಾಡಿ ಎಲ್‌ಇಡಿ ಬಲ್ಬ್‌ಗಳ ಸಮಸ್ಯೆಯನ್ನು ಸ್ಥಳ ಪರಿಶೀಲಿಸಿ ಬಗೆಹರಿಸುವುದಾಗಿ ತಿಳಿಸಿದರು.

ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ, ಸದಸ್ಯರು ರವರು ಸದರಿ ಬಡಾವಣೆಯ ಮುಖ್ಯರಸ್ತೆಯಲ್ಲಿ ವಾಹನಗಳನ್ನು ಖಾಲಿ ಜಾಗದಲ್ಲಿ ನಿಲ್ಲಿಸಿ, ಮಧ್ಯಸೇವನೆಯನ್ನು ಮಾಡಿ ಸಾರ್ವಜನಿಕರಿಗೆ ಕಿರುಕುಳ ಕೊಡುತ್ತಿದ್ದಾರೆಂದು ಈ ಸಮಸ್ಯೆಯನ್ನು ಬಗೆಹರಿಸಲು ಕೋರಿಕೊಂಡರು.

ಈ ಕುರಿತು ನೋಡೆಲ್ ಅಧಿಕಾರಿ ರವರು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್, ಕೊಡಿಗೇಹಳ್ಳಿ ಠಾಣೆ ರವರಿಗೆ ದೂರವಾಣಿ ಮೂಲಕ ಕರೆ ಮಾಡಿ ಮಾತನಾಡಿ ಸದರಿ ಜಾಗಕ್ಕೆ ಪೊಲೀಸ್ ಕಾನ್ಸ್‌ಟೇಬಲ್ ರವರನ್ನು ಕಳುಹಿಸಿ ಕೊಡಲು ಹಾಗೂ ಪೊಲೀಸ್ ಬೀಟ್ಸ್ ಮಾಡಿ ಸಮಸ್ಯೆಯನ್ನು ಬಗೆಹರಿಸುವುದಕ್ಕೆ ಸಭೆಯಲ್ಲಿ ಸೂಚಿಸಿದರು.

ಶ್ರೀ. ಗಂಗಾಧರ್, ಭದ್ರಪ್ಪ ಬಡಾವಣೆಯ ಸದಸ್ಯರು ಮಾತನಾಡಿ, ಸದರಿ ಬಡಾವಣೆಯಲ್ಲಿ ಚರಂಡಿ ನೀರು ರಸ್ತೆಗೆ ಹೊರ ಬರುತ್ತಿದ್ದು, ಸಾರ್ವಜನಿಕರ ಓಡಾಟಕ್ಕೆ ತೊಂದರೆ ಉಂಟಾಗಿರುತ್ತದೆ ಮತ್ತು ಸೊಳ್ಳೆ ಸಮಸ್ಯೆ ಇರುತ್ತದೆ ಹಾಗೂ ಟಾಟಾನಗರದಿಂದ ಎನ್.ಟಿ.ಐ ಬಡಾವಣೆ ಕಡೆಗೆ ಬರುವ ರಸ್ತೆಯಲ್ಲಿ ಪ್ಯಾಚ್ ವರ್ಕ್ ಮತ್ತು ರಸ್ತೆ ಗುಂಡಿಗಳಿಂದ ವಾಹನಗಳ ಅಪಘಾತ ಸಂಭವಿಸುತ್ತಿದೆ ಎಂದು ಸಭೆಗೆ ತಿಳಿಸಿದರು.

ಈ ಸಂದರ್ಭದಲ್ಲಿ ಶ್ರೀ. ಪ್ರವೀಣ್ ಎ.ಆರ್. ರವರು ಮಾತನಾಡಿ, ಈಗಾಗಲೇ ಸ್ಥಳ ಪರಿಶೀಲನೆ ಮಾಡಿದ್ದು, ರಸ್ತೆಗುಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳಲಾಗಿರುತ್ತದೆ ಹಾಗೂ ಚರಂಡಿ ನೀರು ರಸ್ತೆಗೆ ಹರಿಯುತಿರುವ ಕುರಿತು ಬಿಡಬ್ಲ್ಯೂಎಸ್‌ಎಸ್‌ಬಿ ಯವರು ಈ ಕುರಿತು ಕ್ರಮಕೈಗೊಳ್ಳಬೇಕಾಗಿರುತದೆ ಎಂದು ಸಭೆಗೆ ತಿಳಿಸಿದರು.

ಶ್ರೀ ವೆಂಕಟಪ್ಪ, ದೇವಿನಗರ, ಸದಸ್ಯರು ರವರು ಮಾತನಾಡಿ, ಸದರಿ ಬಡಾವಣೆಯಲ್ಲಿ ಯುಜಿಡಿ ಕಾಮಗಾರಿಗಳಿಂದ ರಸ್ತೆ ಹಾಳಾಗಿರುತ್ತದೆ. ವಾಹನಗಳು ಓಡಾಡಲು ಮತ್ತು ಸಾರ್ವಜನಿಕರ ಓಡಾಟಕ್ಕೆ ತುಂಬಾ ತೊಂದರೆ ಉಂಟಾಗಿರುತ್ತದೆ ಎಂದು ಹಾಗೂ ಸಮಸ್ಯೆಯನ್ನು ಬಗೆಹರಿಸಿ ಕೊಡಲು ಸಭೆಗೆ ಕೋರಿದರು.

ಶ್ರೀ ಗುರು, ಕಾ.ಪಾ.ಅ ಹಾಗೂ ನೋಡಲ್ ಅಧಿಕಾರಿ ರವರು ಮಾತನಾಡುತ್ತ, ಬಿಡಬ್ಲ್ಯೂಎಸ್‌ಎಸ್‌ಬಿ ಸಹಾಯಕ ಅಭಿಯಂತರರೊಂದಿಗೆ ಚರ್ಚಿಸಿ ಸಮಸ್ಯೆಯನ್ನು ಬಗೆಹರಿಸಲು ಸೂಚಿಸಿದರು.

ಶ್ರೀ ಗುರು, ಕಾ.ಪಾ.ಅ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

(ಪ್ರವೀಣ್ ಎ.ಆರ್.)
ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ

(ಶ್ರೀ ಗುರು)
ಕಾರ್ಯಪಾಲಕ ಅಭಿಯಂತರರು ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08

<u>ಪ್ರತಿಯನ್ನು:-</u>

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
9. ಕಛೇರಿ ಕಡತಕ್ಕೆ.